ಅ) ಅಂಗನವಾಡಿ ಕಾರ್ಯಕರ್ತೆಯರಿಗೆ ಅವರ ಅರ್ಹತೆ ಮತ್ತು ಅನುಭವದ ಆಧಾರದ ಮೇಲೆ ರೂ. 350ರಿಂದ 450 ರೂ.ವರೆಗೆ ಮಾಸಿಕ ಗೌರವಧನ ಕೊಡಲಾಗುತ್ತಿದೆ. ಅಂಗನವಾಡಿ ಸಹಾಯಕಿಯರಿಗೆ ರೂ. 200ಗಳ ಮಾಸಿಕ ಗೌರವಧನವನ್ನು ಕೊಡಲಾಗುತ್ತಿದೆ. ಕೇಂದ್ರ ಸರ್ಕಾರದ ಐಸಿಡಿಎಸ್ ಯೋಜನೆಗಳ ಅನುಮೋದಿತ ನಿಯಮಾವಳಿ ಪ್ರಕಾರ ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ಗೌರವಧನವನ್ನು ಕೇಂದ್ರ ಸರ್ಕಾರವೇ ಭರಿಸುತ್ತದೆ. ಆದ್ದರಿಂದ ರಾಜ್ಯ ಸರ್ಕಾರದಿಂದ ಗೌರವಧನ ಹೆಚ್ಚುವ ಪ್ರಶ್ನೆ ಉದ್ಭವಿಸುವುದಿಲ್ಲ.

ಗುಲ್ಬರ್ಗಾದಲ್ಲಿ ಬೃಹತ್ ಉದ್ದಿಮೆ

319 - ಶ್ರೀ ರೇವು ನಾಯಕ್ ಬೆಳಮಗಿ (ಕಮಲಾಪುರ) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗಾ ಮತ್ತು ಆಳಂದ ತಾಲ್ಲೂಕುಗಳಲ್ಲಿರುವ ಬೃಹತ್ ಉದ್ದಿಮೆ ಸಂಖ್ಯೆ ಎಷ್ಟು?

ಆ) ಈ ಭಾಗದಲ್ಲಿ ಹೊಸ ಉದ್ದಿಮೆಗಳನ್ನು ಪ್ರಾರಂಭಿಸುವುದಕ್ಕೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಆರ್.ವಿ. ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು):

ಅ) ಗುಲ್ಬರ್ಗಾ ತಾಲ್ಲೂಕಿನಲ್ಲಿ ಒಂದು ಬೃಹತ್ ಉದ್ದಿಮೆ ಹಾಗೂ ಆಳಂದ ತಾಲ್ಲೂಕಿನಲ್ಲಿ ಒಂದು ಗೃಹತ್ ಉದ್ದಿಮೆ ಸ್ಥಾಪನೆಯಾಗಿದೆ.

ಆ) ಈ ಭಾಗದಲ್ಲಿ ಹೊಸ ಉದ್ದಿಮೆಗಳನ್ನು ಪ್ರಾರಂಭಿಸುವುದಕ್ಕೆ ಉದ್ದಿಮೆದಾರರನ್ನು ಪ್ರೋತ್ಸಾಹಿಸುವ ಸಲುವಾಗಿ 94ನೇ ಸಾಲಿನ ಜುಲೈ, ಆಗಸ್ಟ್ ತಿಂಗಳಿನಲ್ಲಿ ಒಂದು ವಿಭಾಗ ಮಟ್ಟದ ಕೈಗಾರಿಕಾ ವಿಚಾರಣಾ ಸಂಕೀರ್ಣ ಮತ್ತು ವಸ್ತು ಪ್ರದರ್ಶನವನ್ನು ಏರ್ಪಾಡು ಮಾಡಲಾಗಿತ್ತು. ಇದರ ಫಲವಾಗಿ ಗುಲ್ಬರ್ಗಾದಲ್ಲಿ ಸುಮಾರು 20 ಕೈಗಾರಿಕೆಗಳನ್ನು ಸ್ಥಾಪನೆ ಮಾಡಲು ಉದ್ದಿಮೆದಾರರು ಮುಂದೆ ಬಂದಿದ್ದು, ಇವರುಗಳನ್ನು ಉತ್ತೇಜಿಸಲು ಕರ್ನಾಟಕ ರಾಜ್ಯ ಕೈಗಾರಿಕಾ ಬಂಡವಾಳ ಅಭಿವೃದ್ಧಿ ನಿಗಮ ನಿಯಮಿತ ರವರ ವತಿಯಿಂದ ಹಾಗೂ ಕರ್ನಾಟಕ ಉದ್ಯೋಗ ಮಿತ್ರರವರ ವತಿಯಿಂದ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

ಕನ್ನಡ ಮತ್ತು ಸಂಸ್ಕೃತಿ ಬಗ್ಗೆ

329 - ಶ್ರೀ ರೇವು ನಾಯಕ್ ಬೆಳಮಗಿ (ಕಮಲಾಪುರ) : ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಹಾಗೂ ಮಹಿಳೆ ಮತ್ತು ಮಕ್ಕಳ ಕಲ್ಯಾಣ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯವರು ಗಡಿ ಪ್ರದೇಶದಲ್ಲಿ ಕನ್ನಡದ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮಗಳೇನು?

ಆ) ಪ್ರಸ್ತುತ ಸಾಲಿನಲ್ಲಿ ಆಳಂದ ಅಫಜಲಪುರ, ಸೇಡಂ ಚಿಂಚೋಳಿ ಯಾದಗಿರಿ ಪ್ರದೇಶದಲ್ಲಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು?

ಶ್ರೀಮತಿ ಬಿ.ಟಿ. ಲಲಿತಾ ನಾಯಕ್ (ಕನ್ನಡ ಮತ್ತು ಸಂಸ್ಕೃತಿ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ರಾಜ್ಯ ಮಂತ್ರಿಗಳು) :

ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕನ್ನಡ ಅಭಿವೃದ್ಧಿ ಕಾರ್ಯಕ್ರಮಗಳಡಿಯಲ್ಲಿ ರಾಜ್ಯದೊಳಗಿರುವ ಗಡಿ ಪ್ರದೇಶದಲ್ಲಿ ಸರ್ಕಾರಿ ಸಿಬ್ಬಂದಿಗೆ ಆಡಳಿತ ಕನ್ನಡ ತರಬೇತಿ ನೀಡುವುದು, ಬೆರಳಚ್ಚುಗಾರರಿಗೆ, ಶೀಘ್ರ ಲಿಪಿಗಾರರಿಗೆ ತರಬೇತಿ ನೀಡುವುದು